ಕರ್ನಾಟಕ ಸರ್ಕಾರ

ಸಂಖ್ಯೆ: ಸಿಒ 207 ಸಿಎಸ್‌ಆರ್ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್.ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ:27.05.2026.

ಸುತ್ತೋಲೆ

ವಿಷಯ: ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರಡಿ ನೋಂದಣಿಗೊಂಡ ಸಂಘ-ಸಂಸ್ಥೆಗಳ ಫೈಲಿಂಗ್ ಕುರಿತು.

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ:ಸಿಒ 46 ಸಿಎಸ್‌ಆರ್ 2023, ದಿನಾಂಕ:29.08.2023.
2. ಸರ್ಕಾರದ ಪತ್ರ ಸಂಖ್ಯೆ:ಸಿಒ 207 ಸಿಎಸ್‌ಆರ್ 2024, ದಿನಾಂಕ:05.03.2025.
3. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಆರ್‌ಸಿಎಸ್/ ಸಂಘಸಂಸ್ಥೆ-01/ 63/ 2024-25, ದಿನಾಂಕ:19.02.2026.

****

ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ-1960 ರಡಿ ರಾಜ್ಯದಲ್ಲಿ ನೋಂದಣಿಗೊಂಡಿರುವ ಸಂಘ ಸಂಸ್ಥೆಗಳು 5 ವರ್ಷಗಳಿಗೂ ಮೇಲ್ಪಟ್ಟು ನವೀಕರಣ ಮಾಡಿಕೊಳ್ಳದೇ ಇರುವ ಸಂಘ ಸಂಸ್ಥೆಗಳನ್ನು ಆ ಸಂಘಗಳ ಸದಸ್ಯರ ಹಿತದೃಷ್ಟಿಯಿಂದ ದಂಡ ವಿಧಿಸಿ ಕೆಲವು ಷರತ್ತುಗಳಿಗೊಳಪಟ್ಟು ಫೈಲಿಂಗ್ ಮಾಡಿಸಿಕೊಳ್ಳಲು ಅನುಮತಿ ನೀಡಲಾಗಿದೆ. ಉಲ್ಲೇಖ(2)ರ ಪತ್ರದಲ್ಲಿ ಮೇಲ್ಕಂಡ ಅವಕಾಶವನ್ನು ದಿನಾಂಕ:31.12.2025ರ ಅಂತ್ಯದವರೆಗೆ ವಿಸ್ತರಿಸಲಾಗಿರುತ್ತದೆ.

ಉಲ್ಲೇಖ(3)ರ ಪತ್ರದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ರಡಿಯಲ್ಲಿ, ನೋಂದಣಿಯಾಗಿರುವ ಸಂಘಗಳು ಅಧಿನಿಯಮದ ಕಲಂ-13 ರಂತೆ ಆಯವ್ಯಯ ಪಟ್ಟಿ ಮತ್ತು ವಾರ್ಷಿಕ ಸಾಧಾರಣ ಸಭೆ ನಡೆದ ನಂತರ ಸಕ್ಷಮ ಪ್ರಾಧಿಕಾರದ ನೋಂದಣಿ ಅಧಿಕಾರಿಗಳಲ್ಲಿ ಫೈಲಿಂಗ್ ಮಾಡಿಕೊಳ್ಳಲು ಅವಕಾಶವಿರುತ್ತದೆ. ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ರಡಿ ನೋಂದಣಿಯಾದಂತಹ ಕೆಲವು ಸಂಘಗಳು 05 ವರ್ಷಗಳಿಗೂ ಮೇಲ್ಪಟ್ಟು ಫೈಲಿಂಗ್ ಮಾಡಿಕೊಳ್ಳಲು ದಿನಾಂಕ:05-03-2025 ರಿಂದ 31-12-2025 ರ ಅಂತ್ಯದವರೆಗೆ ಕಾಲಾವಕಾಶ ನೀಡಲಾಗಿದ್ದರೂ ಸಹ ಹಲವಾರು ಸಂಘ ಸಂಸ್ಥೆಗಳು ಫೈಲಿಂಗ್ ಮಾಡಿಕೊಳ್ಳಲು ವಿಫಲವಾಗಿದ್ದು, ಅಂತಹ ಸಂಘ-ಸಂಸ್ಥೆಗಳು

Scanned with OKEN Scanner

ಫೈಲಿಂಗ್ ಮಾಡಿಕೊಳ್ಳಲು ಮತ್ತೊಮ್ಮೆ ದಿನಾಂಕ:31-12-2026 ರವರೆಗೆ ಅನುಮತಿ ನೀಡುವಂತೆ ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ರಾಜ್ಯದಲ್ಲಿ ನೋಂದಣಿಗೊಂಡಿರುವ ಸಂಘ ಸಂಸ್ಥೆಗಳು 5 ವರ್ಷಗಳಿಗೂ ಮೇಲ್ಪಟ್ಟು ನವೀಕರಣ ಮಾಡಿಕೊಳ್ಳದೇ ಇರುವ ಸಂಘ ಸಂಸ್ಥೆಗಳ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಈ ಕೆಳಕಂಡಂತೆ ಕ್ರಮವಹಿಸಲು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಗಳಿಗೆ ಸೂಚಿಸಿದೆ.

- 5 ವರ್ಷಗಳಿಗೆ ಮೇಲ್ಪಟ್ಟು ಫೈಲಿಂಗ್ ಮಾಡಿಕೊಳ್ಳದೇ ಇರುವ ಸಂಘ-ಸಂಸ್ಥೆಗಳು ಪ್ರತಿ ವರ್ಷಕ್ಕೆ ರೂ.3,000/- ಹೆಚ್ಚುವರಿ ದಂಡ ಪಾವತಿಸಿ ಫೈಲಿಂಗ್ ಮಾಡಿಕೊಳ್ಳತಕ್ಕದ್ದು.
- ಈ ಅವಕಾಶವು ದಿನಾಂಕ:31.12.2026 ರ ಅಂತ್ಯದವರೆಗೆ ಜಾರಿಯಲ್ಲಿರುತ್ತದೆ.
- ಸಂಘದ ಎಲ್ಲಾ ಆಡಳಿತ/ಆಡಿಟ್ ವರದಿಗಳನ್ನು ಮುದ್ರಾಂ/ಆನ್‌ಲೈನ್ ನಲ್ಲಿ ಮಾತ್ರ ಪಡೆದು ಕ್ರಮವಹಿಸತಕ್ಕದ್ದು.

17/5/2026

(ರಂಗನಾಥ. ಜಿ)

ಸರ್ಕಾರದ ಅಧೀನ ಕಾರ್ಯದರ್ಶಿ-3,

ಸಹಕಾರ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52.
3. ಸಹಕಾರ ಸಂಘಗಳ ಜಂಟಿ ನಿಬಂಧಕರು (ಐಸಿಡಿಪಿ), ನಿಬಂಧಕರ ಕಚೇರಿ, ಬೆಂಗಳೂರು.
4. ರಾಜ್ಯದ ಎಲ್ಲಾ ವಿಭಾಗದ ಸಹಕಾರ ಸಂಘಗಳ ಜಂಟಿ ನಿಬಂಧಕರು.
5. ರಾಜ್ಯದ ಎಲ್ಲಾ ಜಿಲ್ಲೆಗಳ ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ.
6. ರಾಜ್ಯದ ಎಲ್ಲಾ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳಿಗೆ.

ಪ್ರತಿ:

1. ಮಾನ್ಯ ಮುಖ್ಯಮಂತ್ರಿಯವರ ಅಪರ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
3. ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಸಹಕಾರ ಇಲಾಖೆ, ಇವರ ಆಪ್ತ ಸಹಾಯಕ, ಸಹಕಾರ ಇಲಾಖೆ.
4. ಶಾಖಾ ರಕ್ಷಾ, ಕಡತ / ಹೆಚ್ಚುವರಿ ಪ್ರತಿಗಳು.

Scanned with OKEN Sca